ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 03 ನೇ ಮಾರ್ಚ್, 2020

ಸ್ಮಾರ್ಟ್ ಸಿಟಿ ಯೋಜನೆಯ ಬಗ್ಗೆ

ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

125 (61) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುಮಕೂರು ನಗರವನ್ನು ಸ್ಮಾರ್ಟ್ ಸಿಟಿ ಎಂದು ಘೋಷಣೆ ಮಾಡಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಇದ್ದಲ್ಲಿ, ಈ ಸ್ಮಾರ್ಟ್ ಸಿಟಿಗೆ ಇಲ್ಲಿಯ ತನಕ ಬಂದಿರುವ ಅನುದಾನವೆಷ್ಟು ; ಬಂದಿದ್ದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಂಡು ಪೂರ್ಣಗೊಳಿಸಲಾಗಿದೆ ; (ವಿವರ ನೀಡುವುದು)

(ಇ) ಪ್ರಾರಂಭ ಮಾಡಿರುವ ಕಾಮಗಾರಿಗಳ ಪೈಕಿ ಪೂರ್ಣಗೊಳಿಸದೆ ಇರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ; ಇವುಗಳಿಗೆ ಹೆಚ್ಚುವರಿಯಾಗಿ ಅನುದಾನದ ಅಗತ್ಯತೆಯೆಷ್ಟು ; (ವಿವರ ನೀಡುವುದು)

(ಈ) 2018-19 ಮತ್ತು 2019-20 ರಲ್ಲಿ ಸ್ಮಾರ್ಟ್ ಸಿಟಿ ವತಿಯಿಂದ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಇವುಗಳಿಗೆ ಒದಗಿಸಿರುವ ಅನುದಾನವೆಷ್ಟು ; ಹಾಲಿ ಖರ್ಚು ಮಾಡಿರುವ ಹಣವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಉ) ಈ ಎರಡು ವರ್ಷದಲ್ಲಿ ಕೈಗೊಂಡಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಎಷ್ಟು ಸಮಯವನ್ನು ನೀಡಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)